# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2010–11 ನೇ ಸಾಲಿನ ಅಂತ್ಯ ಸಂಸ್ಕಾರ ಸಹಾಯ ನಿಧಿ ಯೋಜನೆಯ ಅನುಷ್ಠಾನಕ್ಕಾಗಿ ಎಲ್ಲಾ ಪ್ರಾದೇಶಿಕ ಆಯುಕ್ತರುಗಳಿಗೆ ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:** 1) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 20 ಎಎಸ್‌ಟಿ 2006. ದಿನಾಂಕ:27/01/2007.
2) ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 2 ಎಎಸ್‌ವೈ 2008. ದಿನಾಂಕ:23/04/2008.

**ಪ್ರಸ್ತಾವನೆ:**

ರಾಜ್ಯ ಸರ್ಕಾರವು ರಾಷ್ಟ್ರೀಯ ಕುಟುಂಬ ನೆರವು ಯೋಜನೆಯಡಿಯಲ್ಲಿ 2010–11 ನೇ ಸಾಲಿನ ಆಯವ್ಯಯದಲ್ಲಿ ರೂ.2500.00 ಲಕ್ಷಗಳನ್ನು ಒದಗಿಸಲಾಗಿರುತ್ತದೆ. ಈ ಅನುದಾನದ ಪೈಕಿ 1/3 ಭಾಗದಷ್ಟು ಆಯವ್ಯಯದ ಅನುದಾನ ಅಂದರೆ ರೂ.833.00 ಲಕ್ಷಗಳನ್ನು ಅಂತ್ಯ ಸಂಸ್ಕಾರ ನೆರವು ಯೋಜನೆಯಡಿ ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಸದಸ್ಯರು ಮೃತಪಟ್ಟಲ್ಲಿ ಅವರ ಅಂತ್ಯ ಸಂಸ್ಕಾರಕ್ಕಾಗಿ ಕುಟುಂಬದ ಸದಸ್ಯರಿಗೆ ರೂ.1000.00 ಗಳಂತೆ ನೀಡಲು ಮೀಸಲಿಟ್ಟಿದೆ. ಸದರಿ ಯೋಜನೆಯನ್ನು 2010–11 ನೇ ಸಾಲಿನಲ್ಲೂ ಮುಂದುವರೆಸಲಾಗಿದೆ. ಅದರಂತೆ 2010–11 ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಮೊತ್ತ ರೂ.833.00 ಲಕ್ಷಗಳ ಪೈಕಿ ಮೊದಲ ಹಂತವಾಗಿ ರೂ.200.00 ಲಕ್ಷಗಳನ್ನು ಮೇಲೆ ಓದಲಾದ ಉಲ್ಲೇಖ 2 ರನ್ವಯ ಸಂಬಂಧಪಟ್ಟ ಪ್ರಾದೇಶಿಕ ಆಯುಕ್ತರುಗಳಿಗೆ ಅನುದಾನ ಬಿಡುಗಡೆ ಮಾಡಿ ಅವರ ಮೂಲಕ ಅವರ ವ್ಯಾಪ್ತಿಗೆ ಬರುವ ಜಿಲ್ಲಾಧಿಕಾರಿಗಳಿಗೆ ಮರು ಹಂಚಿಕೆ ಮಾಡಲು ತೀರ್ಮಾನಿಸಿರುವ ಹಿನ್ನಲೆಯಲ್ಲಿ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 1 ಎಎಸ್‌ವೈ 2010, ಬೆಂಗಳೂರು. ದಿನಾಂಕ:07/05/2010.**

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಮಟ್ಟದಲ್ಲಿರುವ ಸದಸ್ಯರು ಮೃತ ಹೊಂದಿದಲ್ಲಿ ಅವರ ಅಂತ್ಯ ಸಂಸ್ಕಾರಕ್ಕಾಗಿ "ಅಂತ್ಯ ಸಂಸ್ಕಾರ ಸಹಾಯ ನಿಧಿ" (Grant for Funeral Expenses) ನೆರವು ಯೋಜನೆಯಡಿ ರೂ.1000.00 ಗಳನ್ನು ನೀಡಲು ರೂ.200.00 ಲಕ್ಷಗಳನ್ನು (ಎರಡು ನೂರು ಲಕ್ಷಗಳು ಮಾತ್ರ) ಸಂಬಂಧಿಸಿದ ಎಲ್ಲಾ ಪ್ರಾದೇಶಿಕ ಆಯುಕ್ತರುಗಳಿಗೆ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧ-1 ರ ಅನ್ವಯ ಬಿಡುಗಡೆ ಮಾಡುತ್ತಾ, ತಮ್ಮ ವ್ಯಾಪ್ತಿಯ ಜಿಲ್ಲಾಧಿಕಾರಿಗಳ ಬೇಡಿಕೆಯನ್ನು ಅನುಸರಿಸಿ ಅಗತ್ಯ ಅನುದಾನವನ್ನು ಮರು ಹಂಚಿಕೆ ಮಾಡಲು ಆದೇಶಿಸಿದೆ.

ಮೇಲ್ಕಂಡಂತೆ ಮಂಜೂರಾದ ಮೊತ್ತವನ್ನು ಅಂತ್ಯ ಸಂಸ್ಕಾರ ನೆರವು ಯೋಜನೆಯ ಅನುಷ್ಠಾನಕ್ಕೆ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಎಲ್ಲಾ ಪ್ರಾದೇಶಿಕ ಆಯುಕ್ತರು ಈ ಯೋಜನೆ ಕುರಿತು ಎಲ್ಲಾ ಜಿಲ್ಲಾಧಿಕಾರಿಗಳ ಮೂಲಕ ವಿಸ್ತಾರವಾಗಿ ಪ್ರಚಾರ ನೀಡತಕ್ಕದ್ದು.

ಈ ಹಣವನ್ನು ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಗೆ ಯಾವುದೇ ಕಾರಣಕ್ಕೂ ಹಾಕಬಾರದು ಹಾಗೂ ಹಣವನ್ನು ಖಜಾನೆ ಇಲಾಖೆಯ ಮುಖಾಂತರವೇ ಸಂಬಂಧಪಟ್ಟ ತಹಸೀಲ್ದಾರರಿಂದ ವರ್ಗಾಯಿಸತಕ್ಕದ್ದು.

ಈ ಯೋಜನೆಗೆ ತಗಲುವ ವೆಚ್ಚವನ್ನು 2010-11 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ 2235-60-102-1-03-059 (ಯೋಜನೆ) ಅಡಿಯಲ್ಲಿ ಭರಿಸತಕ್ಕದ್ದು. ಈ ಯೋಜನೆಯ ಅಂಕಿ ಅಂಶಗಳು ವರದಿಯ ಜೊತೆಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಸೀಲ್ದಾರ್ ಹಾಗೂ ಜಿಲ್ಲಾಧಿಕಾರಿಗಳು-ಪ್ರಾದೇಶಿಕ-ಆಯುಕ್ತರಿಗೆ ಸಲ್ಲಿಸತಕ್ಕದ್ದು. ಪ್ರಾದೇಶಿಕ ಆಯುಕ್ತರು ಪ್ರತಿ ತಿಂಗಳ 10 ನೇ ತಾರೀಖಿನೊಳಗೆ ತಾಲ್ಲೂಕುವಾರು ಮತ್ತು ಜಿಲ್ಲಾವಾರು ಹಣ ಬಳಕೆ ಪ್ರಮಾಣ ಪತ್ರವನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಮತ್ತು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 96 ದಿನಾಂಕ:10/07/1996 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ನೀಡಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್. ಕಾತ್ಯಾಯಿನಿ ದೇವಿ) 7/5
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು,
ಕಂದಾಯ ಇಲಾಖೆ.

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ)(ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, (ಆಯವ್ಯಯ ಮತ್ತು ಸಂಪನ್ಮೂಲ) ವಿಧಾನ ಸೌಧ, ಬೆಂಗಳೂರು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
6. ಎಲ್ಲಾ ಜಿಲ್ಲಾಧಿಕಾರಿಗಳು.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಎಲ್ಲಾ ಉಪ ವಿಭಾಗಧಿಕಾರಿಗಳು/ತಹಸೀಲ್ದಾರರುಗಳಿಗೆ.
9. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
10. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 1 ಎಎಸ್‌ವೈ 2010 ಕ್ಕೆ ಅನುಬಂಧ-1**

| ಕ್ರ.ಸಂ | ಪ್ರಾದೇಶಿಕ ಆಯುಕ್ತರುಗಳ ವಿಭಾಗದ ಹೆಸರು | ಬಿಡುಗಡೆ ಮಾಡಲಾದ ಅನುದಾನದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ | 50.00 |
| 2 | ಪ್ರಾದೇಶಿಕ ಆಯುಕ್ತರು, ಬೆಳಗಾಂ ವಿಭಾಗ | 50.00 |
| 3 | ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ | 50.00 |
| 4 | ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ ವಿಭಾಗ | 50.00 |

(ಎಸ್.ಕಾತ್ಯಾಯಿನಿ ದೇವಿ) 7/5

ಪೀಠಾಧಿಕಾರಿಗಳು,

ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು,

ಕಂದಾಯ ಇಲಾಖೆ.